ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

ಆರನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 31ನೇ ಮಾರ್ಚ್, 2015

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(i) ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯಲು ಮಕ್ಕಳ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕ, 2015
ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು

ಅ) 2015ನೇ ಸಾಲಿನ ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯಲು ಮಕ್ಕಳ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(ii) ಕನ್ನಡ ಭಾಷಾ ಕಲಿಕೆ ವಿಧೇಯಕ, 2015
ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು

ಅ) 2015ನೇ ಸಾಲಿನ ಕನ್ನಡ ಭಾಷಾ ಕಲಿಕೆ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(iii) ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕ, 2015
ಶ್ರೀ ವಿ.ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು) ಅವರು

ಅ) 2015ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(iv) ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2015
ಶ್ರೀ ಹೆಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್) ಅವರು

ಅ) 2015ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೊಂದನೇ ಪಟ್ಟಿ

ಆ) ದಿನಾಂಕ 24.03.2015ರ ಹದಿನಾರನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ವಿ.ಸುನೀಲ್ ಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 233(4759) : ಗೃಹ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೊಂದನೇ ಪಟ್ಟಿ

3. ಅರ್ಜಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್.ಶಿವಶಂಕರರೆಡ್ಡಿ (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಜನಶೆಟ್ಟಿ ಕೊಪ್ಪ ಗ್ರಾಮದ ಸಿದ್ದಿ ಕಾಲೋನಿ ಹಳ್ಳಕ್ಕೆ SEP/TSP ಯೋಜನೆಯಡಿಯಲ್ಲಿ ಕಾಲುಸೇತುವೆ ನಿರ್ಮಾಣ ಮಾಡಲು ಹಾಗೂ ಮೂಲಭೂತ ಸೌಕರ್ಯ ಒದಗಿಸುವ ಬಗೆಗಿನ ಅರ್ಜಿಯನ್ನೊಪ್ಪಿಸುವುದು.

4. ಗಮನ ಸೆಳೆಯುವ ಸೂಚನೆಗಳು

1. ಶ್ರೀಯುತರುಗಳಾದ ಹೆಚ್.ಡಿ.ರೇವಣ್ಣ, ಕೆ.ಎಂ.ಶಿವಲಿಂಗೇಗೌಡ, ಹೆಚ್.ಎಸ್.ಪ್ರಕಾಶ್, ವೈ.ಎಸ್.ವಿ.ದತ್ತ, ಲಕ್ಷ್ಮಣ ಸಂಗಪ್ಪ ಸವದಿ, ಎಂ.ರಾಜಣ್ಣ ಹಾಗೂ ಇತರರು ಕ್ಷೀರಭಾಗ್ಯ ಯೋಜನೆಯಡಿಯಲ್ಲಿ ಮಕ್ಕಳಿಗೆ ಪ್ರತಿವಾರ ಮೂರು ದಿನ ಹಾಲನ್ನು ನೀಡುವ ಬದಲು ಐದು ದಿನ ಹಾಲನ್ನು ವಿತರಿಸುವ ಹಾಗೂ ಒಕ್ಕೂಟಗಳಿಗೆ ರೈತರ ಹಾಲಿನ ಬಿಲ್ಲುಗಳ ಪಾವತಿಗಾಗಿ ಬಡ್ಡಿರಹಿತ ಸಾಲವನ್ನು ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2. ಶ್ರೀಮತಿ ಶಾರದಾ ಪೂರ್ಯ ನಾಯ್ಕ್ ಅವರು ಭದ್ರಾವತಿ ತಾಲ್ಲೂಕು ಅರಬಿಳಚಿ ಕ್ಯಾಂಪ್ ಗ್ರಾಮದಲ್ಲಿ ವಾಸಿಸುತ್ತಿರುವ ಬೋವಿ ಜನಾಂಗದವರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3. ಶ್ರೀ ಗೋವಿಂದ ಎಂ. ಕಾರಜೋಳ ಅವರು 2013-14ನೇ ಸಾಲಿನಲ್ಲಿ ರಾಜ್ಯದ ಗ್ರಾಮೀಣ ಭಾಗದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಯ ಪ್ರಗತಿ ಹಂತದ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

4. ಶ್ರೀ ಹೆಚ್.ಆರ್.ಅಲಗೂರು (ರಾಜು) ಅವರು ವಿಜಯಪುರ ನಗರದಲ್ಲಿ ವಿಮಾನ ನಿಲ್ದಾಣ ನಿರ್ಮಿಸಲು ಏರ್ ಪೋರ್ಟ್ ಅಥಾರಿಟಿ ಆಫ್ ಇಂಡಿಯಾ ಕೋರಿರುವ 50ಕೋಟಿ ಹಣವನ್ನು ಮಂಜೂರು ಮಾಡಿ ವಿಮಾನ ನಿಲ್ದಾಣದ ಕಾಮಗಾರಿಯನ್ನು ಪ್ರಾರಂಭ ಮಾಡದಿರುವ ಬಗ್ಗೆ ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

5. ಶ್ರೀ ಕೆ.ಆರ್.ರಮೇಶ್ ಕುಮಾರ್ ಅವರು ಹಿರಿಯೂರು ತಾಲ್ಲೂಕು ಹುಚ್ಚಪ್ಪನಹಳ್ಳಿ ಗ್ರಾಮದ ಬಳಿ ಸರ್ಕಾರಿ ಹಳ್ಳದಲ್ಲಿ ನಿರ್ಮಿಸಿದ ಕೃಷಿ ನೀರಿನ ಹೊಂಡ ನಿರ್ಮಾಣದ ಬಾಬ್ತು ಬಾಕಿಯಲ್ಲಿನ ಹಣವನ್ನು ಉಚ್ಛ ನ್ಯಾಯಾಲಯದ ಆದೇಶದಂತೆ ಶ್ರೀ ತಿಮ್ಮಯ್ಯನವರಿಗೆ ಪಾವತಿಸುವಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

6. ಶ್ರೀ ಕೆ.ಎಂ.ತಿಮ್ಮರಾಯಪ್ಪ ಅವರು ಓ.ಆರ್.ಎಫ್. ಯೋಜನೆಯಡಿಯಲ್ಲಿ ಪಾವಗಡ ತಾಲ್ಲೂಕು ಅರಸೀಕೆರೆಯಿಂದ ವದನಕಲ್ ರಸ್ತೆ ಕಾಮಗಾರಿ ಕೈಗೊಂಡಿದ್ದು ಎಸ್.ಆರ್. ಪಾಳ್ಯ ಗ್ರಾಮದ ಪರಿಮಿತಿಯಲ್ಲಿ ಎರಡು ಬದಿ ಸಿ.ಸಿ. ರಸ್ತೆ ನಿರ್ಮಾಣ ಕಾಮಗಾರಿ ಮಧ್ಯದಲ್ಲಿ 20-25 ಮೀಟರ್ ರಸ್ತೆ ನಿರ್ಮಾಣ ಮಾಡದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಆರ್.ಜಗದೀಶ್ ಕುಮಾರ್ ಅವರು ಹೆಬ್ಬಾಳ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಬೆಂಗಳೂರು ಉತ್ತರ ತಾಲ್ಲೂಕು ಕಸಬ ಹೋಬಳಿ ನಾಗಶೆಟ್ಟಿ ಹಳ್ಳಿ ಗ್ರಾಮದ ಸರ್ವೆ 6ರಲ್ಲಿರುವ ಒಂದು ಎಕರೆ 17 ಗುಂಟೆ ಜಮೀನು ಕೊಳೆಗೇರಿ ಅಭಿವೃದ್ಧಿ ಮಂಡಳಿಯ ಅನುಮೋದನೆಯಂತೆ ಕೊಳಚೆ ಪ್ರದೇಶವೆಂದು ಘೋಷಣೆಯಾಗಿದ್ದರೂ ಮೆ: ಪೆಬಲ್‌ಬೇ ಡೆವಲಪರ್ಸ್ (ಪ್ರೈ) ಲಿ. ರವರು ವಸತಿ ಸಮುಚ್ಛಯ ನಿರ್ಮಿಸಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

8. ಶ್ರೀ ಎಂ.ಟಿ.ಕೃಷ್ಣಪ್ಪ ಅವರು ತುರುವೇಕೆರೆ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಮಲ್ಟಿವಿಲೇಜ್ ಯೋಜನೆಯಡಿ ಮಲ್ಲಘಟ್ಟ ಕೆರೆಯಿಂದ ಲೋಕಮ್ಮನಹಳ್ಳಿ, ಆನೇಕೆರೆ ಗ್ರಾಮ ಪಂಚಾಯತಿಗಳಿಗೆ ಹಾಗೂ ಸಾರಿಗೆ ಹಳ್ಳಿ ಕೆರೆಯಿಂದ ಹಮ್ಮಸಂದ್ರ ಪಂಚಾಯತಿ ಹಾಗೂ ದಂಡಿನಶಿವಾರ ಪಂಚಾಯತಿಯ ಗ್ರಾಮಗಳಿಗೆ ಕುಡಿಯುವ ನೀರಿನ ಸರಬರಾಜು ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

9. ಶ್ರೀ ಬಿ.ಎನ್. ವಿಜಯಕುಮಾರ್ ಅವರು ಬೆಂಗಳೂರಿನ ಕನಕಪುರ ರಸ್ತೆಯ ಸಾರಕ್ಕಿ ಗೇಟ್ ಜಂಕ್ಷನ್ ಬಳಿ ರಸ್ತೆ ಮತ್ತು ರಸ್ತೆ ಬದಿಯಲ್ಲಿ ಪ್ರತಿನಿತ್ಯ ತರಕಾರಿ ಮಾರುಕಟ್ಟೆ ನಡೆಯುತ್ತಿದ್ದು ಜನದಟ್ಟಣೆ ಹೆಚ್ಚಾಗಿರುವುದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.,.

10. ಶ್ರೀ ಹೆಚ್.ಕೆ.ಕುಮಾರಸ್ವಾಮಿ ಅವರು ಜಲಸಂಪನ್ಮೂಲ ಇಲಾಖೆಗೆ ಸೇರಿದ ಗೊರೂರು ಹೇಮಾವತಿ ಜಲಾಶಯ ಯೋಜನೆ ಕಛೇರಿಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವು ನಿರುಪಯುಕ್ತವಾಗಿದ್ದು ಇದನ್ನು ಹಾಸನ ಜಿಲ್ಲೆ ಕಟ್ಟಾಯ ಗ್ರಾಮಕ್ಕೆ ಸ್ಥಳಾಂತರಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

11. ಶ್ರೀ ಪಿ.ಆರ್.ಸುಧಾಕರ್ ಲಾಲ್ ಅವರು ಕೊರಟಗೆರೆ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಭಾಗದ ಜನರಿಗೆ ಸರಬರಾಜು ಮಾಡುವ ಕುಡಿಯುವ ನೀರಿನ ಟ್ಯಾಂಕರ್‌ಗಳಿಗೆ ನಿಗದಿಪಡಿಸಿರುವ ೩೫೦ರೂ ಗಳನ್ನು ೮೦೦ರೂ ಗಳಿಗೆ ಹೆಚ್ಚಿಸುವ ಬಗ್ಗೆ ಹಾಗೂ ನೀರು ಸರಬರಾಜು ಮಾಡಿರುವವರಿಗೆ ಬಾಕಿ ಹಣ ಪಾವತಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

12. ಶ್ರೀಮತಿ ವೈ. ರಾಮಕ್ಕ ಅವರು ಕೆ.ಜಿ.ಎಫ್ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶ ಹೆಚ್ಚಾಗಿರುವುದರಿಂದ, ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

13. ಶ್ರೀ ಎನ್.ಚಲುವರಾಯಸ್ವಾಮಿ ಅವರು ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕು ಕೊಪ್ಪ ಹೋಬಳಿ ಅಬಲವಾಡಿ ಸರ್ಕಾರಿ ಪ್ರೌಢ ಶಾಲೆಗೆ 18 ಲಕ್ಷ ರೂಪಾಯಿಗಳ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

14. ಶ್ರೀ ಹೆಚ್.ಎಸ್.ಶಿವಶಂಕರ್ ಅವರು ದಾವಣಗೆರೆ ಜಿಲ್ಲೆ, ಹರಿಹರ ವಿಧಾನಸಭಾ ಕ್ಷೇತ್ರದ ಮಲೆಬೆನ್ನೂರು ಗ್ರಾಮವನ್ನು ಪುರಸಭೆಯನ್ನಾಗಿ ಮಾಡುವ ಬಗ್ಗೆ ಹಾಗೂ ಹರ್ಲಾಪುರ ಗ್ರಾಮವನ್ನು ನಗರ ಸಭೆಗೆ ಸೇರಿಸುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

15. ಶ್ರೀ ಮನೋಹರ್ ಹೆಚ್. ತಹಶೀಲ್ದಾರ್ ಅವರು ಗ್ರಾಮೀಣ ಭಾಗದಲ್ಲಿ ಆರ್.ಎಂ.ಪಿ. ಖಾಸಗಿಯಾಗಿ ಬಡಜನರಿಗೆ ಪ್ರಥಮ ಚಿಕಿತ್ಸೆಯನ್ನು ನೀಡಲು ಅನುಮತಿ ನೀಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

16. ಶ್ರೀ ಹೆಚ್.ಸಿ.ಬಾಲಕೃಷ್ಣ ಅವರು ಬೆಂಗಳೂರು ದಕ್ಷಿಣ ತಾಲ್ಲೂಕು ಕೆಂಗೇರಿ ಹೋಬಳಿ, ಕೊಮ್ಮಘಟ್ಟ ಗ್ರಾಮದ ಸರ್ವೆ ನಂ ೩೦ರಲ್ಲಿ ನ್ಯಾಯಾಲಯದ ಆದೇಶಕ್ಕೆ ವಿರುದ್ಧವಾಗಿ ವಸತಿ ಸಮುಚ್ಚಯವನ್ನು ನಿರ್ಮಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.,.

17. ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ ಮತ್ತು ಹೆಚ್.ಎಸ್.ಶಿವಶಂಕರ ಅವರುಗಳು ಸರ್ಕಾರಿ ಆದೇಶ ಸಂಖ್ಯೆ ವಾಪ್ರಾಯು 186 ಯುಸೇಕ್ರೀ 2005 ನ್ನು ಪುನರ್ ಪರಿಶೀಲಿಸಿ ರಾಜ್ಯದಲ್ಲಿ ಕ್ರೀಡಾಂಗಣ ಸಮಿತಿಗಳಲ್ಲಿ ಸ್ಥಳೀಯ ಶಾಸಕರನ್ನು ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಎಸ್.ಟಿ.ಸೋಮಶೇಖರ್, ಬಿ.ಎ. ಬಸವರಾಜ್, ಎಸ್.ಆರ್.ವಿಶ್ವನಾಥ್, ಶಿವಣ್ಣ ಬಿ, ಮುನಿರತ್ನ ಹಾಗೂ ಇತರರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್‌ಗಳಿಗೆ ಹೊಸದಾಗಿ ಸೇರ್ಪಡೆಯಾಗಿರುವ 110 ಹಳ್ಳಿಗಳಿಗೆ ಕುಡಿಯುವ ನೀರಿನ ಯೋಜನೆಯನ್ನು ಶೀಘ್ರವಾಗಿ ಕೈಗೊಳ್ಳುವ ಬಗ್ಗೆ ಚರ್ಚೆ.

2. ಶ್ರೀ ಗೋವಿಂದ ಎಂ.ಕಾರಜೋಳ ಅವರು ಕೃಷ್ಣಾ ಮೇಲ್ದಂಡೆ ಯೋಜನೆಯ ಕಾಮಗಾರಿಗಳಿಗೆ 2013-14 ಮತ್ತು 2014-15ರಲ್ಲಿ ನಿಗದಿಪಡಿಸಿದ ಅನುದಾನ, ಬಿಡುಗಡೆಯಾದ ಮೊತ್ತ ಹಾಗೂ ಕಾಮಗಾರಿಗಳಿಗೆ ಉಪಯೋಗಿಸಿದ ಮೊತ್ತದ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj Natgouda

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)